## ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ಗೊಟ್ಟಿಗೆರೆ ವಾರ್ಡ್ ಸಂಖ್ಯೆ-194,

## ವಾರ್ಡ್ ಕಛೇರಿಯಲ್ಲಿ ದಿನಾಂಕ: 18-12-2021 ರಂದು ನಡೆದ ವಾರ್ಡ್ ಸಮಿತಿ ಸಭೆಯ ನಡವಳಿಗಳು.

| ಹಾಜರಿದ್ದವರು | ಗೈರುಹಾಜರಿ |
|---|---|
| 1. ಅಧ್ಯಕ್ಷರು, ಗೊಟ್ಟಿಗೆರೆ, ವಾರ್ಡ್ ಸಮಿತಿ, ಬೊಮ್ಮನಹಳ್ಳಿ, ಬೆಂಗಳೂರು.<br>2. ಸಹಾಯಕ ಕಾರ್ಯಪಾಲಕ ಅಭಿಯಂತರರು (ಬೆಸ್ಕಾಂ), ಗೊಟ್ಟಿಗೆರೆ.<br>3. ಸಹಾಯಕ ಕಾರ್ಯಪಾಲಕ ಅಭಿಯಂತರರು (ಬಿ.ಡಬ್ಲ್ಯೂ.ಎಸ್.ಎಸ್.ಬಿ)<br>4. ತೋಟಗಾರಿಗೆ ಸಹಾಯಕರು, ಗೊಟ್ಟಿಗೆರೆ<br>5. ಕಿರಿಯ ಆರೋಗ್ಯ ಪರಿವೀಕ್ಷಕರು, ವಾರ್ಡ್ 194, ಗೊಟ್ಟಿಗೆರೆ.<br>6. ಕಿರಿಯ ಅಭಿಯಂತರರು (ಬೆಸ್ಕಾಂ), ಗೊಟ್ಟಿಗೆರೆ.<br>7. ಸಂಚಾರ ಪೊಲೀಸ್, ಗೊಟ್ಟಿಗೆರೆ<br>8. ಅರಣ್ಯ ಸಂರಕ್ಷಣಾಧಿಕಾರಿ, ಗೊಟ್ಟಿಗೆರೆ.<br>9. ಸಹಾಯಕ ಕಾರ್ಯಪಾಲಕ ಅಭಿಯಂತರರು (ಘನತ್ಯಾಜ್ಯ ನಿರ್ವಹಣೆ)<br><br>ಸ್ಥಳೀಯ ಸಂಘ ಸದಸ್ಯರು:-<br>1. ಅಧ್ಯಕ್ಷರು, ರಾಯಲ್ ಕೌಂಟಿ, ರೆಸಿಡೆನ್ಸಿಯಲ್ ವೆಲ್‌ಫೇರ್ ಅಸೋಸಿಯೇಷನ್, ಗೊಟ್ಟಿಗೆರೆ.<br>2. ಅಧ್ಯಕ್ಷರು, ಕೆ.ಸಿ.ಐ ಲೇಔಟ್, ರೆಸಿಡೆನ್ಸಿಯಲ್ ವೆಲ್‌ಫೇರ್ ಅಸೋಸಿಯೇಷನ್, ಗೊಟ್ಟಿಗೆರೆ.<br>3. ಅಧ್ಯಕ್ಷರು, ಸೌತ್ ಅವೆನ್ಯೂ, ರೆಸಿಡೆನ್ಸಿಯಲ್ ವೆಲ್‌ಫೇರ್ ಅಸೋಸಿಯೇಷನ್, ಗೊಟ್ಟಿಗೆರೆ.<br>4. ಅಧ್ಯಕ್ಷರು, ಹಿಮಗಿರಿ ಮೆಡೋಸ್, ರೆಸಿಡೆನ್ಸಿಯಲ್ ವೆಲ್‌ಫೇರ್ ಅಸೋಸಿಯೇಷನ್, ಗೊಟ್ಟಿಗೆರೆ.<br>5. ಅಧ್ಯಕ್ಷರು, ಐ.ಡಿ.ಬಿ.ಐ ಬಡಾವಣೆ, ರೆಸಿಡೆನ್ಸಿಯಲ್ ವೆಲ್‌ಫೇರ್ ಅಸೋಸಿಯೇಷನ್, ಗೊಟ್ಟಿಗೆರೆ<br>6. ಅಧ್ಯಕ್ಷರು, ಜೆ.ಪಿ ನಗರ, 9ನೇ ಹಂತ, 7ನೇ ಬ್ಲಾಕ್ ರೆಸಿಡೆನ್ಸಿಯಲ್ ವೆಲ್‌ಫೇರ್ ಅಸೋಸಿಯೇಷನ್, ಗೊಟ್ಟಿಗೆರೆ.<br>7. ಅಧ್ಯಕ್ಷರು, ಪರಿವರ್ತನ ಸಂಘ, ರೆಸಿಡೆನ್ಸಿಯಲ್ ವೆಲ್‌ಫೇರ್ ಅಸೋಸಿಯೇಷನ್, ಗೊಟ್ಟಿಗೆರೆ | 1. ಹಿರಿಯ ಆರೋಗ್ಯ ಪರಿವೀಕ್ಷಕರು ಹಾಗೂ ಕಾರ್ಯದರ್ಶಿ, ವಾರ್ಡ್ ನಂ.194, ಗೊಟ್ಟಿಗೆರೆ.<br>2. ವಾರ್ಡ್ ಸಹಾಯಕ ಅಭಿಯಂತರರು ವಾರ್ಡ್ ನಂ.194, ಗೊಟ್ಟಿಗೆರೆ<br>3. ಆರೋಗ್ಯಧಿಕಾರಿಗಳು, ಗೊಟ್ಟಿಗೆರೆ. |

ದಿನಾಂಕ: 18-12-2021 ರಂದು ಮಧ್ಯಾಹ್ನ 03:00 ಘಂಟೆಗೆ ನಡೆಸಲಾದ ವಾರ್ಡ್ ಸಮಿತಿ ಸಭೆಯಲ್ಲಿ ಅಧ್ಯಕ್ಷರು ರವರು ಸಭೆಯಲ್ಲಿ ಎಲ್ಲರನ್ನು ಸ್ವಾಗತಿಸುತ್ತಾ, ಸಭೆಯಲ್ಲಿ ಈ ಕೆಳಕಂಡ ವಿಷಯಗಳ ಬಗ್ಗೆ ಚರ್ಚಿಸಲಾಯಿತು.

Scanned by CamScanner

1. **ಕೋವಿಡ್-19 ಸಂಬಂಧ ಸೊಂಕು ಹರಡುವುದನ್ನು ತಡೆಗಟ್ಟುವ ಸಂಬಂಧ ತೆಗೆದುಕೊಳ್ಳಬೇಕಾದ ಮುಂಜಾಗ್ರತ ಬಗ್ಗೆ.**

ಕೋವಿಡ್-19 ರೂಪಾಂತರಿಯ ತಳಿಯ ಸೊಂಕು ಪತ್ತೆಯಾಗಿರುವ ಹಿನ್ನೆಲೆಯಲ್ಲಿ ಸೊಂಕು ಹರಡದಂತೆ ಕ್ರಮಗಳನ್ನು ಹಾಗೂ ಸೊಂಕು ನಿಯಂತ್ರಣ ಕ್ರಮಗಳನ್ನು ಅನುಸರಿಸಲು ಹಾಗೂ ಅರ್ಹ ಸಾರ್ವಜನಿಕರು ಲಸಿಕೆಯನ್ನು ಪಡೆಯಲು ಸೂಚಿಸಲಾಯಿತು.

ಆರೋಗ್ಯಾಧಿಕಾರಿಗಳು ಸಭೆಗೆ ಹಾಜರಾಗಿರುವುದಿಲ್ಲ, ಮುಂದಿನ ಸಭೆಗೆ ವರದಿಯೊಂದಿಗೆ ಹಾಜರಾಗಲು ಸಭೆಯಲ್ಲಿ ಸೂಚಿಸಲಾಯಿತು.

2. **ಘನತ್ಯಾಜ್ಯ ನಿರ್ವಹಣೆಯ ಬಗ್ಗೆ.**

(I) ವಾರ್ಡ್ ಕಛೇರಿ ರಸ್ತೆಯಲ್ಲಿರುವ ಪಾರ್ಕಿನಲ್ಲಿ ಘನತ್ಯಾಜ್ಯವನ್ನು ಸಮರ್ಪಕವಾಗಿ ನಿರ್ವಹಿಸಲು ಸೂಚಿಸಲಾಯಿತು.

3. **ವಾರ್ಡ್ ವ್ಯಾಪ್ತಿಯಲ್ಲಿ ವಿದ್ಯುತ್ ಸರಬರಾಜು ಸಂಬಂಧಿಸಿದ ವಿಷಯಗಳ ಬಗ್ಗೆ.**

(I) ಗಾಯಾತ್ರಿ ತಪೋವನಾ, ಕ್ರಿಸ್ಟಲ್ ಬೆರಿಲ್ ಅಪಾರ್ಟ್ಮೆಂಟ್ ರ ಎದುರು ದುರಸ್ಥಿಗೊಂಡಿರುವ ಕಂಬಗಳನ್ನು ತೆರುವುಗೊಳಿಸಲು ಸೂಚಿಸಲಾಯಿತು.

(II) ಸುರಭಿನಗರ, ಬಿ.ಡಿ.ಎ ಬಡಾವಣೆ, ಬನ್ನೇರುಘಟ್ಟ ಮುಖ್ಯ ರಸ್ತೆಯಲ್ಲಿರುವ ಸ್ಟಾರ್ ಬಝಾರ್ ಬಸ್ ನಿಲ್ದಾಣದಲ್ಲಿ ಬೀದಿ ದೀಪಗಳನ್ನು ದುರಸ್ಥಿಗೊಳಿಸಲು ಸಹಾಯಕ ಅಭಿಯಂತರರು (ವಿದ್ಯುತ್) ನಿರ್ವಾಹಕ ಗುತ್ತಿಗೆದಾರರೊಂದಿಗೆ ಕ್ರಮ ವಹಿಸಲು ಸೂಚಿಸಲಾಯಿತು.

(III) ರಾಯಲ್ ಕೌಂಟಿ ಬಡಾವಣೆ ಹಾಗೂ ಕೆಂಬತಹಳ್ಳಿ ರಸ್ತೆಯಲ್ಲಿ ವಿದ್ಯುತ್‌ನ ಏರಿಳಿತವಿದ್ದು, ಸದರಿ ದುರಸ್ಥಿ ಕಾರ್ಯವನ್ನು ಕೈಗೊಳಲು ಸಹಾಯಕ ಅಭಿಯಂತರರು (ವಿದ್ಯುತ್) ರವರಿಗೆ ಸೂಚಿಸಲಾಯಿತು.

(IV) ಹಿಮಗಿರಿ ಮೆಡೋಸ್ ಬಡಾವಣೆಯಲ್ಲಿ Transformer ದುರಸ್ಥಿ ಕಾರ್ಯವನ್ನು ಕೂಡಲೆ ಕೈಗೊಳ್ಳಲು ತಿಳಿಸಲಾಯಿತು.

4. **ಬಿ.ಡಬ್ಲ್ಯೂ.ಎಸ್.ಎಸ್.ಬಿ ಸಂಬಂಧಿಸಿದ ವಿಷಯಗಳ ಬಗ್ಗೆ.**

(I) ಸೌತ್ ಅವೆನ್ಯೂ ಬಡಾವಣೆಯಲ್ಲಿ ಒಳಚರಂಡಿ ಸಂಪರ್ಕದ ಮಿಸ್ಸಿಂಗ್ ಲಿಂಕ್ಸ್ ಕಾರ್ಯ ಕೈಗೊಳ್ಳಲು ಬಿಡಬ್ಲ್ಯೂಎಸ್.ಎಸ್.ಬಿ ರವರು ಪಾಲಿಕೆಯ ವಾರ್ಡ್ ಅಭಿಯಂತರರೊಂದಿಗೆ ಸ್ಥಳ ಪರಿಶೀಲಿಸಿ ಕ್ರಮವಹಿಸಲು.

(II) ಗೊಟ್ಟಿಗೆರೆ ವಾರ್ಡ್ ವ್ಯಾಪ್ತಿಯಲ್ಲಿ ನಿಯತಕಾಲಿಕವಾಗಿ ಕೈಗೊಳ್ಳುತ್ತಿರುವ ಕುಡಿಯುವ ನೀರಿನ ಪರಿಕ್ಷಾ ಫಲಿತಾಂಶ ವರದಿಯನ್ನು ಹಂಚಿಕೊಳ್ಳಲು ಸಹಾಯಕ ಕಾರ್ಯಪಾಲಕ ಅಭಿಯಂತರರು (ಬಿ.ಡಬ್ಲ್ಯೂ.ಎಸ್.ಎಸ್.ಬಿ) ರವರಿಗೆ ಸೂಚಿಸಲಾಯಿತು.

(III) ಕೆ.ಸಿ.ಎ ಬಡಾವಣೆ 4ನೇ ಅಡ್ಡ ರಸ್ತೆಯಲ್ಲಿ, ಒಳಚರಂಡಿ ನೀರು ಸೋರಿಕೆಯಿದ್ದು, ಸದರಿ ದುರಸ್ಥಿ ಕಾರ್ಯದ ಬಗ್ಗೆ ಅಗತ್ಯ ಕ್ರಮ ವಹಿಸಲು ಸಹಾಯಕ ಕಾರ್ಯಪಾಲಕ ಅಭಿಯಂತರರು (ಬಿ.ಡಬ್ಲ್ಯೂ.ಎಸ್.ಎಸ್.ಬಿ) ರವರಿಗೆ ಸೂಚಿಸಲಾಯಿತು.

(IV) ಬಿ.ಡಿ.ಎ ಅಪಾರ್ಟ್‌ಮೆಂಟ್‌ರಲ್ಲಿ ಸಂಸ್ಕರಿಸಿದ ನೀರಿನಿಂದ ದುರ್ವಾಸನೆ ಉಂಟಾಗುತ್ತಿದ್ದು, ಸ್ಥಳ ಪರಿಶೀಲಿಸಿ ಅಗತ್ಯ ಕ್ರಮ ವಹಿಸಲು ತಿಳಿಸಲಾಯಿತು.

Scanned by CamScanner

(V) ಜೆ.ಪಿ.ನಗರ, 9ನೇ ಹಂತ, 7ನೇ ಬ್ಲಾಕ್ ರಲ್ಲಿ ಮ್ಯಾನ್ಹೋಲ್ ಮುಚ್ಚಳಗಳ ನಿರ್ಮಾಣ ಕಾರ್ಯವನು ಜನವರಿ ಮಾಹೆಯ ಮೊದಲನೇ ವಾರದೊಳಗೆ ಪೂರ್ಣಗೊಳ್ಳುವುದಾಗಿ ಸಹಾಯಕ ಕಾರ್ಯಪಾಲಕ ಅಭಿಯಂತರರು (ಬಿ.ಡಬ್ಲ್ಯೂ.ಎಸ್.ಎಸ್.ಬಿ) ಸಭೆಗೆ ತಿಳಿಸಿದರು.

**5. ಮಳೆ ನೀರು, ಚರಂಡಿ ಕಾಮಗಾರಿ ಕುರಿತು.**

(I) ಬನ್ನೇರುಘಟ್ಟ ಮುಖ್ಯ ರಸ್ತೆಯಲ್ಲಿರುವ ಸೋಲಾರಿಸ್ ಅಪಾರ್ಟ್‌ಮೆಂಟ್ ರವರು ಪಕ್ಕದಲ್ಲಿರುವ ಹಿಮಗಿರಿ ಮೆಡೋಸ್ ಕಾಂಪೌಂಡ್ ಗೋಡೆಯಲ್ಲಿ ರಂಧ್ರ ಮಾಡಿ ತ್ಯಾಜ್ಯ ನೀರನ್ನು ಬಿಡುತ್ತಿರುವ ಸಂಬಂಧ ಸಹಾಯಕ ಕಾರ್ಯಪಾಲಕ ಅಭಿಯಂತರರು (ಬಿ.ಡಬ್ಲ್ಯೂ.ಎಸ್.ಎಸ್.ಬಿ)/(ಎಸ್.ಎಚ್) ರವರು ಸ್ಥಳ ಪರಿಶೀಲಿಸಿ ನೋಟಿಸ್ ಜಾರಿಗೊಳಿಸಲು ಸೂಚಿಸಲಾಯಿತು.

**6. ರಸ್ತೆ ಕಾಮಗಾರಿ ಹಾಗೂ ರಸ್ತೆ ಪಾದಚಾರಿ ಬಗ್ಗೆ.**

(I) ಕೆ.ಸಿಎ ಬಡಾವಣೆಯ 4 ರಸ್ತೆಗಳಲ್ಲಿ ಡಾಂಬರೀಕರಣ ಕಾರ್ಯದ ಬಗ್ಗೆ ವಾರ್ಡ್ ಅಭಿಯಂತರರು ಪರಿಶೀಲಿಸಿ ಮುಂದಿನ ಕ್ರಿಯಾ ಯೋಜನೆಯಡಿಯಲ್ಲಿ ಕೈಗೊಳ್ಳಲು ಸೂಕ್ತ ಕ್ರಮ ವಹಿಸಲು ಸೂಚಿಸಲಾಯಿತು.

(II) ವಾರ್ಡ್ ವ್ಯಾಪ್ತಿಯ ರಸ್ತೆಗಳಲ್ಲಿ ರಸ್ತೆ ಅಪಘಾತಗಳನ್ನು ತಡೆಯುವ ನಿಟ್ಟಿನಲ್ಲಿ ರಸ್ತೆ ಗೂನುಗಳನ್ನು (Hump) ಅಳವಡಿಸಬಹುದಾದ ಸ್ಥಳಗಳನ್ನು ಗುರುತಿಸಿ ವರದಿ ಸಲ್ಲಿಸಲು ಸಂಚಾರ ಪೊಲೀಸರಿಗೆ ಸೂಚಿಸಲಾಯಿತು.

**7. ಅರಣ್ಯ ಇಲಾಖೆಯ ವಿಷಯಗಳ ಬಗ್ಗೆ.**

(I) ವಾರ್ಡ್‌ನ ವಿವಿಧ ಬಡಾವಣೆಗಳಲ್ಲಿ ಪಾದಚಾರಿಯ ಮೇಲಿನ ಮರಗಳ ಹಾನಿಕರ ಕೊಂಬೆಗಳನ್ನು ಕಡಿತಗೊಳಿಸಿರುವುದಾಗಿ ಅರಣ್ಯ ಸಂರಕ್ಷಣಾಧಿಕಾರಿ ಸಭೆಗೆ ತಿಳಿಸಿದರು.

**ವಾರ್ಡ್ ಅಭಿಯಂತರರು ಹಾಗೂ ವೈದ್ಯಾಧಿಕಾರಿಗಳ ಯಾವುದೇ ಪೂರ್ವಾನುಮತಿ ಪಡೆಯದೆ ಸಭೆಗೆ ಗೈರಹಾಜರಾಗಿರುವುದು ಸ್ವೀಕಾರಾರ್ಹವಲ್ಲ ಎಂದು ಗಮನಿಸಲಾಗಿದೆ. ಇನ್ನು ಮುಂದೆ ಎಲ್ಲಾ ವಾರ್ಡ್ ಸಭೆಗಳಿಗೆ ಹಾಜರಿರುವಂತೆ ನೋಟಿಸ್ ಜಾರಿ ಮಾಡಲು ತೀರ್ಮಾನಿಸಲಾಲಿತು.**

**ಈ ಮೇಲೆ ತಿಳಿಸಿರುವ ಎಲ್ಲಾ ವಿಷಯ / ಸಮಸ್ಯೆಗಳ ಬಗ್ಗೆ ನಿಯಮಾನುಸಾರ ಅಗತ್ಯ ಕ್ರಮ ವಹಿಸಲು ಹಾಗೂ ಮುಂದಿನ ಸಭೆಗೆ ಅನುಪಾಲನಾ ವರದಿಯೊಂದಿಗೆ ಸಂಬಂಧಪಟ್ಟ ಅಧಿಕಾರಿಗಳು ಹಾಜರಾಗಲು ಸೂಚಿಸುತ್ತಾ ಸಭೆಯನ್ನು ಮುಕ್ತಾಯಗೊಳಿಸಲಾಯಿತು.**

22-12-2021

ಕಾರ್ಯದರ್ಶಿಗಳು
ಹಾಗೂ ಹಿರಿಯ ಆರೋಗ್ಯ ಪರಿವೀಕ್ಷಕರು
ವಾರ್ಡ್ ಸಂಖ್ಯೆ: 194, ಗೊಟ್ಟಿಗೆರೆ.

ಪ್ರತಿಯನ್ನು:-

1. ಮಾನ್ಯ ಆಯುಕ್ತರು ರವರ ಅವಗಾಹನೆಗೆ ಸಲ್ಲಿಸಲು ಆಪ್ತ ಕಾರ್ಯಾಲಯಕ್ಕೆ ಸಲ್ಲಿಸಿದೆ.
2. ಜಂಟಿ ಆಯುಕ್ತರು (ಬೊಮ್ಮನಹಳ್ಳಿ) ರವರ ಅವಗಾಹನೆಗೆ ಸಲ್ಲಿಸಿದೆ.
3. ಉಪ ಆಯುಕ್ತರು (ಆಡಳಿತ) ರವರ ಅವಗಾಹನೆಗೆ ಸಲ್ಲಿಸಿದೆ.

Scanned by CamScanner

4. ಮುಖ್ಯ ಅಭಿಯಂತರರು (ಬೊಮ್ಮನಹಳ್ಳಿ) ರವರ ಅವಗಾಹನೆಗೆ ಸಲ್ಲಿಸಿದೆ.
5. ಅಧೀಕ್ಷಕ ಅಭಿಯಂತರರು (ಬೊಮ್ಮನಹಳ್ಳಿ) ರವರ ಅವಗಾಹನಗೆ ಸಲ್ಲಿಸಿದೆ.
6. ಕಾರ್ಯಪಾಲಕ ಅಭಿಯಂತರರು, ಬಿಬಿಎಂಪಿ, ಗೊಟ್ಟಿಗೆರೆ ರವರಿಗೆ ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ.
7. ಸಹಾಯಕ ಕಾರ್ಯಪಾಲಕ ಅಭಿಯಂತರರು, [illegible] , ಗೊಟ್ಟಿಗೆರೆ ರವರಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ ಕಳುಹಿಸದೆ.
8. ಸಹಾಯಕ ನಿರ್ದೇಶಕರು (ಪಶುಪಾಲನೆ), ಗೊಟ್ಟಿಗೆರೆ ರವರಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ ಕಳುಹಿಸದೆ.
9. ಕಾರ್ಯಪಾಲಕ ಅಭಿಯಂತರರು, ವಿದ್ಯುತ್ (ಬೊಮ್ಮನಹಳ್ಳಿ) ವಲಯ ಬಿಬಿಎಂಪಿ.
10. ಕಾರ್ಯಪಾಲಕ ಅಭಿಯಂತರರು, ಬೆಸ್ಕಾಂ.
11. ಕಾರ್ಯಪಾಲಕ ಅಭಿಯಂತರರು, ರಸ್ತೆ ಮತ್ತು ಮೂಲಭೂತ ಸೌಕರ್ಯಗಳು, ಬಿಬಿಎಂಪಿ
12. ಕಾರ್ಯಪಾಲಕ ಅಭಿಯಂತರರು, ಕೆರೆಗಳ ವಿಭಾಗ ಬಿಬಿಎಂಪಿ.
13. ಕಾರ್ಯಪಾಲಕ ಅಭಿಯಂತರರು, ಬೃಹತ್ ನೀರುಗಾಲುವೆ ವಿಭಾಗ ಬಿಬಿಎಂಪಿ.
14. ತೋಟಗಾರಿಕೆ ಅಧೀಕ್ಷಕರು, ಬೊಮ್ಮನಹಳ್ಳಿ ವಲಯ.
15. ಆರೋಗ್ಯ ವೈದ್ಯಾಧಿಕಾರಿಗಳು, ಬೊಮ್ಮನಹಳ್ಳಿ ವಲಯ.
16. ಆರೋಗ್ಯ ವೈದ್ಯಾಧಿಕಾರಿಗಳು, ಪ್ರಾಥಮಿಕ ಆರೋಗ್ಯ ಕೇಂದ್ರ.
17. ಸಹಾಯಕ ಕಾರ್ಯಪಾಲಕ ಅಭಿಯಂತರರು ಘನತ್ಯಾಜ್ಯ ನಿರ್ವಹಣಾ ವಿಭಾಗ.
18. ಸಹಾಯಕ ಕಂದಾಯ ಅಧಿಕಾರಿ ಅಂಜನಾಪುರ ವಿಭಾಗ.
19. ಕಲ್ಯಾಣಾಧಿಕಾರಿಗಳು ಬೊಮ್ಮನಹಳ್ಳಿ ವಲಯ.
20. ಉಪವಲಯ ಅರಣ್ಯ ಸಂರಕ್ಷಣಾಧಿಕಾರಿಗಳು, ಬೊಮ್ಮನಹಳ್ಳಿ ವಲಯ.
21. ಪೋಲೀಸ್ ಇನ್ಸ್‌ಪೆಕ್ಟರ್, ಹುಳಿಮಾವು ಮತ್ತು ಕೋಣನಕುಂಟೆ ಪೋಲೀಸ್ ಠಾಣೆ.
22. ಕಂದಾಯ ಅಧಿಕಾರಿಗಳು, ಅಂಜನಾಪುರ ಉಪ ವಲಯ.
23. ಸ್ಥಳೀಯ ನಾಗರಿಕ ಕಲ್ಯಾಣ ಸಂಸ್ಥೆಗಳು.

Scanned by CamScanner